## ಕರ್ನಾಟಕ ಸರ್ಕಾರ

ಸಂ.ಟಿಡಿ 160 ಟಿಡಿಒ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:06.03.2024.

### ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 160 ಟಿಡಿಒ 2020, ದಿನಾಂಕ: 14-07-2021ರನ್ವಯ ಸಾರ್ವಜನಿಕ ಸಾರಿಗೆಗಾಗಿ ಮೊದಲ ಮತ್ತು ಕೊನೆಯ ಹಂತದ ಸಾರಿಗೆ ಸಂಪರ್ಕವನ್ನು ಕಲ್ಪಿಸುವ ಮತ್ತು ಸ್ವಯಂ ಉದ್ಯೋಗ ಅವಕಾಶವನ್ನು ಒದಗಿಸುವ ಉದ್ದೇಶದಿಂದ, ಮೋಟಾರು ವಾಹನ ಕಾಯ್ದೆ 1988ರ (1998ರ ಕೇಂದ್ರ ಅಧಿನಿಯಮ 59)ರ ಕಲಂ 2ರ ಉಪಕಲಂ (1) ಕ್ರಮ ಸಂಖ್ಯೆ: 38(ಎ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು, ಕರ್ನಾಟಕ ರಾಜ್ಯದಲ್ಲಿನ ಎಲ್ಲಾ ನಗರ ಪ್ರದೇಶಗಳಿಗೆ ಅನ್ವಯಿಸುವಂತೆ "ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ 2021" ನ್ನು ಜಾರಿಗೆ ತರಲಾಗಿತ್ತು.

ಕರ್ನಾಟಕ ರಾಜ್ಯದಲ್ಲಿ ಬೈಕ್ ಟ್ಯಾಕ್ಸಿ ಸೇವೆಯ ಅಗತ್ಯತೆ ಮತ್ತು ಜಾರಿಯ ಬಗ್ಗೆ ವ್ಯವಸ್ಥಾಪಕ ನಿರ್ದೇಶಕರು, BMRCL ರವರ ಅಧ್ಯಕ್ಷತೆಯಲ್ಲಿ ರಚಿಸಲಾದ ಸಮಿತಿಯ ವರದಿಯಲ್ಲಿ ಬೈಕ್ ಟ್ಯಾಕ್ಸಿ ಯೋಜನೆಗೆ ಸಂಬಂಧಿಸಿದಂತೆ ವರದಿಯು ಪೂರಕವಾಗಿರುವುದಿಲ್ಲವೆಂದು ತಿಳಿಸಿದೆ. ಪ್ರಸ್ತುತ ಕೆಲವು ಖಾಸಗಿ ಆಪ್ ಆಧಾರಿತ ಸಂಸ್ಥೆಗಳು ಮೋಟಾರು ವಾಹನ ಕಾಯ್ದೆ ಮತ್ತು ಅದರಡಿ ರಚಿತವಾದ ನಿಯಮಗಳನ್ನು ಉಲ್ಲಂಘಿಸಿ ಅನಧಿಕೃತವಾಗಿ ಸಾರಿಗೇತರ (Non-transport) ದ್ವಿಚಕ್ರ ವಾಹನಗಳನ್ನು ಸಾರಿಗೆ (Transport) ವಾಹನಗಳನ್ನಾಗಿ ಉಪಯೋಗಿಸುತ್ತಿರುವುದು ಕಂಡುಬಂದಿರುತ್ತದೆ. ಖಾಸಗಿ ಸಾರಿಗೆ ಕ್ಷೇತ್ರಗಳಲ್ಲಿನ ಇತರೆ ಆಟೋರಿಕ್ಷಾ, ಮ್ಯಾಕ್ಸಿ ಕ್ಯಾಬ್ ಮತ್ತು ಟ್ಯಾಕ್ಸಿ ಸಂಘಗಳು / ಚಾಲಕರುಗಳು, ಬೈಕ್ ಟ್ಯಾಕ್ಸಿ ಚಾಲಕರ ವಿರುದ್ಧ ಹಲವಾರು ಬಾರಿ ಸಂಘರ್ಷಣೆಗಳು ನಡೆದು, ಮೊಕದ್ದಮೆಗಳು ದಾಖಲಾಗುತ್ತಿರುವುದನ್ನು ಮತ್ತು ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡುತ್ತಿರುವುದನ್ನು ಹಾಗೂ ಮಹಿಳೆಯರಿಗೆ ಈ ಯೋಜನೆ ಅಸುರಕ್ಷಿತವಾಗಿರುವುದನ್ನು ಸಹ ಗಮನಿಸಲಾಗಿದೆ. ಸಾರಿಗೆ ಇಲಾಖೆಯ ರಾಜಸ್ವ ಸಂಗ್ರಹಣೆಗೆ ಮತ್ತು ಪ್ರವರ್ತನ ಚಟುವಟಿಕೆಯ ಸಮರ್ಥ ಕಾರ್ಯನಿರ್ವಹಣೆಗೆ ಈ ಯೋಜನೆಯಿಂದ ಕಷ್ಟವಾಗುತ್ತಿದೆ. ಈ ಎಲ್ಲಾ ಅಂಶಗಳ ಹಿನ್ನೆಲೆಯಲ್ಲಿ, "ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ 2021" ನ್ನು ಜಾರಿಗೊಳಿಸಿ ಹೊರಡಿಸಲಾದ ಸರ್ಕಾರದ ಅಧಿಸೂಚನೆ ಸಂಖ್ಯೆ: ಟಿಡಿ 160 ಟಿಡಿಒ 2020, ದಿನಾಂಕ:14-07-2021ನ್ನು ಈ ಮೂಲಕ ರದ್ದುಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Pushpa V.S.
(ಪುಷ್ಪ ವಿ.ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ವಿಕಾಸಸೌಧ, ಬೆಂಗಳೂರು:_ಇವರಿಗೆ ಮುಂದಿನ ಇ-ಗೆಜೆಟ್‌ನಲ್ಲಿ ಪ್ರಕಟಿಸಲು.

1. ಪ್ರಧಾನ ಮಹಾಲೇಖಪಾಲರು (ಆಡಿಟ್-1) / (ಆಡಿಟ್-2), ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಅಂಚೆಪೆಟ್ಟಿಗೆ ಸಂಖ್ಯೆ:5398 ಕರ್ನಾಟಕ ಪಾರ್ಕ್ ಹೌಸ್ ರಸ್ತೆ, ಅಂಚೆಪೆಟ್ಟಿಗೆ ಸಂಖ್ಯೆ:5359, ಬೆಂಗಳೂರು-560001.

2. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಟಿ.ಟಿ.ಎಂ.ಸಿ. ಸಂಕೀರ್ಣ, 1ನೇ ಮಹಡಿ, 'ಎ'ಬ್ಲಾಕ್, ಶಾಂತಿನಗರ, ಬೆಂಗಳೂರು-27.

**ಪ್ರತಿ:**

1. ಎಲ್ಲಾ ಅಪರ ಸಾರಿಗೆ ಆಯುಕ್ತರು/ಜಂಟಿ ಸಾರಿಗೆ ಆಯುಕ್ತರು/ ಉಪಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು / ಪ್ರಾದೇಶಿಕ ಸಾರಿಗೆ ಅಧಿಕಾರಿಗಳು / ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು:-ಸಾರಿಗೆ ಆಯುಕ್ತರ ಮುಖಾಂತರ.
2. ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಾರಿಗೆಇಲಾಖೆ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಾರಿಗೆ ಇಲಾಖೆ, ಬೆಂಗಳೂರು.
6. ಶಾಖಾ ರಕ್ಷಾಕಡತ / ಹೆಚ್ಚುವರಿ ಪ್ರತಿಗಳು / ಒ.ಡಿ.ಜಿ.ಸಿ.,